O.S.No.345/2017
PW -1

ದಿನಾಂಕ 26/07/2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯ್ತು
ಮುಖ್ಯ ವಿಚಾರಣೆ :- ಶ್ರೀ ಎಸ್.ಆರ್.ಆರ್. ವಾದಿ ಪರ ವಕೀಲರಿಂದ

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ಸತ್ಯವಾಗಿದೆ, ಹಾಗೂ ಸದರಿ ಪ್ರಮಾಣ ಪತ್ರಕ್ಕೆ ನಾನೇ ತಿಳಿದು ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ನಾನು ಈ ದಿನ ಪ್ರತಿವಾದಿ ಸಲ್ಲಿಸಿದ ಸಾಲದ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ನಮ್ಮ ಬ್ಯಾಂಕಿನವರು ನೀಡಿದ ಸಾಲ ಮಂಜೂರಾತಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಕರಾರು ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ನೊಂದಾಯಿತ ಅಡಮಾನ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಹರಹರರೊಪ್ಪ ಗ್ರಾಮದ ಸರ್ವೆ ನಂ-34 ಇದರ ಒಂದು ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಪ್ರತಿವಾದಿ ಖಾತೆಗೆ ಸಂಬಂಧಿಸಿದ ಅಕೌಂಟ್ ಎಕ್ಟ್ರಾಕ್ಟ್ ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಗುರುತಿಸಲಾಯಿತು.

ನಾನು ಹಾಜರುಪಡಿಸಿರುವ ದಾಖಲಾತಿಗಳನ್ನು ಪರಿಗಣಿಸಿ ದಾವೆಯನ್ನು ಡಿಕ್ರಿಗೊಳಿಸಬೇಕಾಗಿ ಕೋರುತ್ತೇನೆ.

**ಪಾಟೀ ಸವಾಲುಃ- ಪ್ರತಿವಾದಿ ಏಕ ತರ್ಫಿ ಆದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆ ನ್ಯಾ ನ ಉ ಲೇ ಬೆ ಮಾ )

ಓ ಹೇ ಕೇ ಸ ಇ ಎ ಒ

( ರಘುನಾಥ ಗೌಡ ಕೆ.ಟಿ. )
ಪ್ರಧಾನ ಸಿವಿಲ್ ಜಡ್ಜ್, ಮಧುಗಿರಿ